ವಿಷಯ :- ಅಂಗನವಾಡಿ ಕಾರ್ಯಕರ್ತೆಯರ ಮನವಿ.

Q:1498

ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಅಂಗನವಾಡಿ ಕಾರ್ಯಕರ್ತೆಯರು ತಮ್ಮ ಬೇಡಿಕೆಗಳನ್ನು ಒತ್ತಾಯಿಸಿ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆಯೆ?

ಆ) ಸಲ್ಲಿಸಿದ್ದಲ್ಲಿ ಕೈಗೊಂಡ ಕ್ರಮಗಳೇನು?

ಶ್ರೀ ಧರ್ಮಸಿಂಗ್ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) ಇವರ ಪ್ರಮುಖ ಬೇಡಿಕೆಗಳ ಪೈಕಿ ಈ ಕೆಳಕಂಡ ಬೇಡಿಕೆಗಳ ಬಗ್ಗೆ ಕ್ರಮ ಕೈಗೊಳ್ಳಲಾಗಿದೆ.

ಎ) 10 ವರ್ಷ ಸೇವೆ ಸಲ್ಲಿಸಿದ ಅರ್ಹ ಕಾರ್ಯಕರ್ತೆಯರು ಇಲಾಖೆಯ ಮೇಲ್ವಿಚಾರಕಿಯರ ಹುದ್ದೆಗೆ ಅರ್ಜಿಗಳನ್ನು ಸಲ್ಲಿಸಲು ಹಾಗೂ ಅವರ ವಯೋಮಿತಿಯಲ್ಲಿ ರಿಯಾಯಿತಿ ನೀಡಲು ಇಲಾಖೆಯ ವ್ಯಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶ ಮಾಡಲಾಗಿದೆ.

ಬಿ) ದಿನಭತ್ಯೆಯನ್ನು ರೂ. 5-50 ರಿಂದ ರೂ. 20 ಗಳಿಗೆ ಏರಿಸಲಾಗಿದೆ.

ಸಿ) ಗೌರವಧನವನ್ನು ಹೆಚ್ಚಿಸಿ ದಿನಾಂಕ 31-12-92 ರಂದು ಆದೇಶ ಹೊರಡಿಸಿದೆ.

ಡಿ) ಉಳಿದ ಕೆಲವು ಬೇಡಿಕೆಗಳನ್ನು ಪರಿಶೀಲಿಸಲಾಗುತ್ತಿದೆ.

ವಿಷಯ :- ರಾಜ್ಯ ಸರ್ಕಾರದ ಕೈಗಾರಿಕಾ ನೀತಿ.

Q:1497

ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ರಾಜ್ಯ ಸರ್ಕಾರದ ಕೈಗಾರಿಕಾ ನೀತಿ ಏನು?

ಶ್ರೀಮತಿ ನಾಗಮ್ಮ ಕೇಶವಮೂರ್ತಿ (ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು) :

ಅ) 1990ರ ರಾಜ್ಯ ಸರ್ಕಾರದ ನೀತಿಯ ಪ್ರಮುಖ ಅಂಶಗಳು ಈ ಕೆಳಕಂಡಂತಿವೆ :

1) ಖಾದಿ ಮತ್ತು ಗ್ರಾಮೋದ್ಯೋಗ ಘಟಕಗಳಿಗೆ ಪ್ರೋತ್ಸಾಹ ಮತ್ತು ಈ ಘಟಕಗಳು ಉತ್ಪಾದಿಸುವ ವಸ್ತುಗಳ ಮೇಲೆ ಮಾರಾಟ ತೆರಿಗೆ ವಿನಾಯಿತಿ ನೀಡುವುದು.

2) ಸಣ್ಣ ಕೈಗಾರಿಕೆಗಳು ತಯಾರಿಸಿದ ಉತ್ಪನ್ನಗಳನ್ನು ಖರೀದಿಸುವಂತೆ ಸರ್ಕಾರಿ ಸಂಸ್ಥೆಗಳಿಗೆ ಒತ್ತಾಯಿಸುವುದು.